ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ಗೃಹ - CD ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 6/4/21

# ಆರ್‌ಜೆಗೆ ಕರೋನಾ ಸೋಂಕು ನಿಜಾನಾ?

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು 6/4/21

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರಿಗೆ ಕರೋನಾ ಸೋಂಕು ತಗುಲಿದ್ದು, ಅವರನ್ನು ಗೋಕಾಕ್ ಆಸ್ಪತ್ರೆಗೆ ದಾಖಲಿಸಲಾಗಿದೆ ಎನ್ನಲಾಗುತ್ತಿದೆ. ಈ ಮಧ್ಯೆ ಅವರ ಆಪ್ತ ಸಚಿವ ಬೈರತಿ ಬಸವರಾಜ್ ಹೇಳಿಕೆ ಮತ್ತು ವಕೀಲರ ವಿಡಿಯೋ ಗೊಂದಲ ಮೂಡಿಸಿದೆ.

ಸೋಮವಾರ ರಮೇಶ್ ಜಾರಕಿಹೊಳಿ ಅವರು ಎಸ್‌ಐಟಿ ವಿಚಾರಣೆಗೆ ಹಾಜರಾಗಬೇಕಿತ್ತು. ಆದರೆ, ಅವರು ವಿಚಾರಣೆಗೆ ಹಾಜರಾಗಿರಲಿಲ್ಲ. ಈ ಸಂಬಂಧ ಸಿಡಿ ಪ್ರಕರಣದ ಸಂತ್ರಸ್ತೆ ಪೊಲೀಸ್ ಆಯುಕ್ತರಿಗೆ ಪತ್ರ ಬರೆದು, ಎಸ್‌ಐಟಿ ಆರೋಪಿಯನ್ನು ಬಿಟ್ಟು ನನ್ನನ್ನೇ ಹೆಚ್ಚಾಗಿ ವಿಚಾರಣೆಗೆ ಒಳಪಡಿಸುತ್ತಿದೆ. ಹೀಗಾಗಿ, ಎಸ್‌ಐಟಿ ತನಿಖೆ ಬಗ್ಗೆ ನನಗೆ ನಂಬಿಕೆ ಇಲ್ಲ ಎಂದು ಹೇಳಿದ್ದರು.

ವಿಚಾರಣೆಗೆ ಹಾಜರಾಗಬೇಕಾದದ್ದು, ಅನಿವಾರ್ಯ ಎನಿಸುತ್ತಿದ್ದಂತೆ ರಮೇಶ್ ಜಾರಕಿಹೊಳಿ ಆಸ್ಪತ್ರೆಗೆ ದಾಖಲಾಗಿದ್ದು, ಕರೋನಾ ಪಾಸಿಟೀವ್ ಬಂದಿದೆ ಎಂದು ಹೇಳಲಾಗುತ್ತಿದೆ. ಗೋಕಾಕ್‌ನ ತಾಲೂಕು ಆಸ್ಪತ್ರೆಯಲ್ಲಿ ಅವರಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಆಸ್ಪತ್ರೆ ವೈದ್ಯರು ತಿಳಿಸಿದ್ದಾರೆ. ಆದರೆ, ಅವರು ಆಸ್ಪತ್ರೆಯಲ್ಲಿ ಇಲ್ಲ, ಅವರನ್ನು ರಕ್ಷಣೆ ಮಾಡುವ ಉದ್ದೇಶದಿಂದ ಇಂತಹ ನಾಟಕ ಸೃಷ್ಟಿ ಮಾಡಲಾಗುತ್ತಿದೆ ಎಂದು ಕಾಂಗ್ರೆಸ್ ನಾಯಕರು ಮತ್ತು ಕೆಲವು ವಕೀಲರು ಆರೋಪ ಮಾಡುತ್ತಿದ್ದಾರೆ.

ಈ ನಡುವೆ ಬೈರತಿ ಬಸವರಾಜ್ ಅವರು, ರಮೇಶ್ ಜಾರಕಿಹೊಳಿ ಅವರಿಗೆ ಕರೋನಾ ಆಗಿರುವುದು ಸತ್ಯ. ಆದರೆ, ಅವರು ಬೆಳಗಾವಿ ಅಥವಾ ಗೋಕಾಕ್‌ನಲ್ಲಿ ಇಲ್ಲ, ಬೆಂಗಳೂರಿನಲ್ಲಿದ್ದಾರೆ ಎಂದು ಹೇಳಿದ್ದರು. ಈ ಹೇಳಿಕೆ ಇದೀಗ ಕುತೂಹಲ ಮೂಡಿಸಿದ್ದು, ಬೆಂಗಳೂರಿನಲ್ಲಿರುವ ಜಾರಕಿಹೊಳಿ ಅವರನ್ನು ಗೋಕಾಕ್‌ನಲ್ಲಿದ್ದಾರೆ ಎಂದು ಹೇಳಿರುವುದು ಅನುಮಾನ ಮೂಡಿಸಿದೆ. ಈ ಸಂಬಂಧ ಪರವಿರೋಧ ಚರ್ಚೆಗಳು ನಡೆಯುತ್ತಿವೆ.



ಗೋಕಾಕ್‌ನ ಕೋವಿಡ್ ವಾರ್ಡ್‌ನ ಐಸಿಯು ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಾಜಿ ಸಚಿವ ರಮೇಶ್ ಜಾರಕಿಹೊಳಿ.

ರಮೇಶ್ ಜಾರಕಿಹೊಳಿ ಅವರಿಗೆ ಸೋಂಕು ತಗುಲಿರುವುದು ದೃಢಪಟ್ಟಿದೆ. ಮನೆಯಲ್ಲಿ ಚಿಕಿತ್ಸೆ ತೆಗೆದುಕೊಳ್ಳುತ್ತಿದ್ದರು. ಭಾನುವಾರ ರಾತ್ರಿ ತೀವ್ರ ಉಸಿರಾಟದ ತೊಂದರೆ ಉಂಟಾದ ಕಾರಣ ಜತೆಗೆ ಅವರಿಗೆ ಬಿಪಿ ಇರುವ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಸದ್ಯ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

- **ರವೀಂದ್ರ ಅಂಟಿನ್** ಗೋಕಾಕ್ ಸರಕಾರಿ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ

ಗೋಕಾಕ್ ಆಸ್ಪತ್ರೆಯಲ್ಲಿ ರಮೇಶ್ ಜಾರಕಿಹೊಳಿ ದಾಖಲಾಗಿಲ್ಲ. ವೈದ್ಯರು ಸುಳ್ಳು ಹೇಳುತ್ತಿದ್ದಾರೆ ಎಂದು ಆರೋಪಿಸಿರುವ ವಕೀಲ ಗಿಡ್ಡವರ್, ರಮೇಶ್ ಜಾರಕಿಹೊಳಿ ಅವರಿಗೆ ಕರೋನಾ ಸೋಂಕು ತಗುಲಿಲ್ಲ. ಸುಮ್ಮನೆ ಸುಳ್ಳು ಹೇಳಿಕೆ ನೀಡುತ್ತಿದ್ದಾರೆ. ಅವರು ಗೋಕಾಕ್ ಆಸ್ಪತ್ರೆಯಲ್ಲಿ ದಾಖಲಾಗಿಲ್ಲ ಎಂದು ಹೇಳಿದ್ದರು. ಈ ಸಂಬಂಧ ವಿಡಿಯೋ ಒಂದನ್ನು ಜಾಲತಾಣದಲ್ಲಿ ಹರಿಬಿಡಲಾಗಿತ್ತು.

→ 4

10

# ಆರ್‌ಜೆಗೆ ಕರೋನಾ ನಿಜನಾ?

ಇದಕ್ಕೆ ಪ್ರತ್ಯುತ್ತರವಾಗಿ ರಮೇಶ್ ಜಾರಕಿಹೊಳಿ ಆಸ್ಪತ್ರೆಯ ಬೆಡ್ ಮೇಲೆ ಮಲಗಿರುವ ವಿಡಿಯೋ ಬಿಡುಗಡೆ ಮಾಡಿರುವ ವೈದ್ಯರು, ರಮೇಶ್ ಜಾರಕಿಹೊಳಿ ಆಸ್ಪತ್ರೆಯಲ್ಲಿಯೇ ಇದ್ದಾರೆ ಎಂದು ಹೇಳಿದ್ದಾರೆ. ಒಟ್ಟಾರೆ, ಈ ಪ್ರಕರಣ ವಿಡಿಯೋಗಳಿಂದಲೇ ತುಂಬಿಹೋಗಿದ್ದು, ಇದರಲ್ಲಿ ಯಾವ ವಿಡಿಯೋ ಸತ್ಯ, ಯಾವ ವಿಡಿಯೋ ನಕಲಿ ಎಂಬ ಗೊಂದಲದಲ್ಲೇ ಜನರು ಮುಳುಗಿದ್ದಾರೆ.

**ನ್ಯಾಯಾಧೀಶರ ಮುಂದೆ ಯುವತಿ ಹೇಳಿಕೆ ದಾಖಲು:** ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸಿಡಿ ಪ್ರಕರಣದ ಸಂತ್ರಸ್ತ ಯುವತಿ ಮತ್ತೊಮ್ಮೆ ನ್ಯಾಯಾಧೀಶರ ಮುಂದೆ ಹಾಜರಾಗಿ ಅಪಹರಣ ಪ್ರಕರಣಕ್ಕೆ ಸಂಬಂಧಿಸಿ ಹೇಳಿಕೆ ನೀಡಿದ್ದಾರೆ. ಬೆಂಗಳೂರಿನ ವಸಂತನಗರದ ಗುರುನಾನಕ್ ಭವನದ ವಿಶೇಷ ಕೋರ್ಟ್‌ಗೆ ಹಾಜರಾಗಿದ್ದ ಯುವತಿ, ಹೇಳಿಕೆ ದಾಖಲು ಮಾಡಿದ್ದಾರೆ. ಆಕೆಯ ಪೋಷಕರ ದೂರಿನ ಹಿನ್ನೆಲೆಯಲ್ಲಿ ಈ ಹೇಳಿಕೆ ದಾಖಲು ಮಾಡಲಾಗಿದೆ. ಆಕೆ ವಾಸಸ್ಥಳದ ಆಧಾರದ ಮೇರೆಗೆ ಪ್ರಕರಣ ಆರ್.ಟಿ.ನಗರ ಪೊಲೀಸ್ ಠಾಣೆಗೆ ವರ್ಗಾವಣೆಯಾಗಿತ್ತು. ಆನಂತರ ಅದೇ ಪ್ರಕರಣ ಎಸ್‌ಐಟಿಗೂ ವರ್ಗಾವಣೆ ಆಗಿತ್ತು. ಈ ಪ್ರಕರಣದ ವಿಚಾರಣೆ ವೇಳೆ, ನನ್ನನ್ನು ಯಾರು ಅಪಹರಣ ಮಾಡಿರಲಿಲ್ಲ. ಜೀವ ಭಯದಿಂದ ನಾನಾಗಿ ಹೊರ ರಾಜ್ಯಗಳಿಗೆ ಹೋಗಿ ತಲೆಮರೆಸಿಕೊಂಡಿದ್ದೆ ಎಂದು ಯುವತಿ ಹೇಳಿಕೆ ನೀಡಿದ್ದಳು. ಈ ಸಂಬಂಧ ಅಪಹರಣ ಪ್ರಕರಣ ಮುಕ್ತಾಯಗೊಳಿಸಲು ಹಾಗೂ ನ್ಯಾಯಾಧೀಶರ ಮುಂದೆ ಹೇಳಿಕೆ ನೀಡಲು ಎಸ್‌ಐಟಿ ಅಧಿಕಾರಿಗಳು ಕರೆತಂದಿದ್ದರು.

**ರಮೇಶ್ ಜಾರಕಿಹೊಳಿ ಆಸ್ಪತ್ರೆಗೆ ದಾಖಲು:** ಸಿಡಿ ಪ್ರಕರಣಕ್ಕೆ ಸಂಬಂಧಿಸಿ ಸೋಮವಾರ ಎಸ್‌ಐಟಿ ವಿಚಾರಣೆಗೆ ಹಾಜರಾಗಬೇಕಿದ್ದ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರಿಗೆ ಕರೋನಾ ಸೋಂಕು ತಗುಲಿರುವುದು ದೃಢಪಟ್ಟಿದ್ದು,



ಬೆಳಗಾವಿಯ ಗೋಕಾಕ್ ಪಟ್ಟಣದ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಾಲೂಕು ಮುಖ್ಯ ವೈದ್ಯಾಧಿಕಾರಿ ರವೀಂದ್ರ ಅಂಟಿನ್ ಸ್ಪಷ್ಟಪಡಿಸಿದ್ದಾರೆ. ಎಸ್‌ಐಟಿ ಮುಂದೆ ವಿಚಾರಣೆ ಹಾಜರಾಗಬೇಕಿದ್ದ ರಮೇಶ್ ಜಾರಕಿಹೊಳಿ ಅವರು ಅನಾರೋಗ್ಯದ ಕಾರಣ ನೀಡಿ ಗೈರಾಗಿದ್ದರು. ರಮೇಶ್ ಜಾರಕಿಹೊಳಿ ಸೋಮವಾರ ವಿಚಾರಣೆ ಬರುವುದಾಗಿ ಅವರ ಪರ ವಕೀಲ ಶ್ಯಾಮ್ ಸುಂದರ್ ತಿಳಿಸಿದ್ದರು. ಆದರೆ ಮಹಾರಾಷ್ಟ್ರದ ಕೊಲ್ಲಾಪುರದ ಮಹಾಲಕ್ಷ್ಮಿ ದೇವಸ್ಥಾನಕ್ಕೆ ಭೇಟಿ ನೀಡಿ ವಾಪಸ್ಸಾಗಿದ್ದ ಜಾರಕಿಹೊಳಿ ಅವರನ್ನು ವೈದ್ಯರು ತಪಾಸಣೆ ನಡೆಸಿದ್ದ ಸಂದರ್ಭದಲ್ಲಿ ಕರೋನಾ ಸೋಂಕು ಇರುವುದಾಗಿ ದೃಢಪಟ್ಟಿದೆ ಎಂದು ವೈದ್ಯಾಧಿಕಾರಿ ರವೀಂದ್ರ ಅಂಟಿನ್ ಮಾಹಿತಿ ನೀಡಿದ್ದಾರೆ.

ರಮೇಶ್ ಜಾರಕಿಹೊಳಿ ಅವರಿಗೆ ಕರೋನಾ ಸೋಂಕು ತಗುಲಿರುವ ಬಗ್ಗೆ ನನಗೆ ಸ್ಪಷ್ಟ ಮಾಹಿತಿ ಇಲ್ಲ. ಅವರ ಕಡೆಯವರಿಗೆ ಖಚಿತವಾದ ಮಾಹಿತಿ ನೀಡುವಂತೆ ಹೇಳಿದ್ದೇನೆ. ರಮೇಶ್ ಜಾರಕಿಹೊಳಿ ಅವರಿಗೆ ವಿಚಾರಣೆಗೆ ಹಾಜರಾಗಲು ಎಸ್‌ಐಟಿ ಈವರೆಗೂ ನೋಟಿಸ್ ನೀಡಿಲ್ಲ. ಹಾಗಾಗಿ ಸೋಮವಾರ ವಿಚಾರಣೆಗೆ ಗೈರು ಹಾಜರಾಗಿದ್ದಾರೆ ಎಂಬ ಆರೋಪ ಅಪ್ರಸ್ತುತ.

-ಶ್ಯಾಮ್ ಸುಂದರ್ ರಮೇಶ್ ಜಾರಕಿಹೊಳಿ ಪರ ವಕೀಲ

ಆರೋಪಿ ರಮೇಶ್ ಜಾರಕಿಹೊಳಿ ಅವರ ಆರೋಗ್ಯ ಬೇಗ ಚೇತರಿಸಿಕೊಳ್ಳಲಿ ಎಂದು ಕೊಲ್ಲಾಪುರದ ಮಹಾಲಕ್ಷ್ಮಿ ದೇವಿಯ ಬಳಿ ಪ್ರಾರ್ಥನೆ ಮಾಡುತ್ತೇನೆ. ಬಹುಬೇಗ ಎಸ್‌ಐಟಿ ಎದುರು ಹಾಜರಾಗಿ ಪ್ರಕರಣದ ಚಾರ್ಜ್‌ಶೀಟ್ ಬೇಗ ಆಗಲಿ.

-ಜಗದೀಶ್ ಯುವತಿ ಪರ ವಕೀಲ